ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ವಿಧಾನಸಭೆ ಸದಸ್ಯರು

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ    ದಿನಾಂಕ : DATE : 4/8/20

# ಸಿದ್ದರಾಮಯ್ಯಗೆ ಜ್ವರ: ಮಣಿಪಾಲ ಆಸ್ಪತ್ರೆಗೆ ದಾಖಲು

• **ಕನ್ನಡಪ್ರಭ ವಾರ್ತೆ** ಬೆಂಗಳೂರು: ಜ್ವರ ಕಾಣಿಸಿಕೊಂಡ ಹಿನ್ನೆಲೆಯಲ್ಲಿ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನಗರದ ಮಣಿಪಾಲ ಆಸ್ಪತ್ರೆಗೆ ತೆರಳಿ ತಪಾಸಣೆ ಮಾಡಿಸಿಕೊಂಡಿದ್ದು, ವೈದ್ಯರ ಸಲಹೆ ಮೇರೆಗೆ ಆಸ್ಪತ್ರೆಗೆ ದಾಖಲಾಗಿದ್ದಾರೆ.



ಸೋಮವಾರ ಜ್ವರ ಕಾಣಿಸಿಕೊಂಡ ಹಿನ್ನೆಲೆಯಲ್ಲಿ ಅವರು ಆಸ್ಪತ್ರೆಗೆ ತೆರಳಿದ್ದರು. ತಪಾಸಣೆ ನಡೆಸಿದ ವೈದ್ಯರು, ಮೂತ್ರದ ಸೋಂಕಿನಿಂದ ಕಾಣಿಸಿಕೊಂಡಿರುವ ಜ್ವರ ಇದಾಗಿದ್ದು, ಆತಂಕಪಡುವ ಅಗತ್ಯವಿಲ್ಲ ಎಂದು ತಿಳಿಸಿದರು. ಆದರೂ ಆಸ್ಪತ್ರೆಯಲ್ಲೇ ವಿಶ್ರಾಂತಿ ಪಡೆಯಲು ವೈದ್ಯರು ಸೂಚಿಸಿದ್ದರಿಂದ ಸಿದ್ದರಾಮಯ್ಯ ಅಲ್ಲಿಗೆ ದಾಖಲಾದರು ಎಂದು ಮೂಲಗಳು ತಿಳಿಸಿವೆ. ಸಿಎಂ ಯಡಿಯೂರಪ್ಪ ಕೂಡ ಇದೇ ಆಸ್ಪತ್ರೆಯಲ್ಲಿ ದಾಖಲಾಗಿದ್ದಾರೆ. ಈ ಹಿನ್ನೆಲೆಯಲ್ಲಿ ಯಡಿಯೂರಪ್ಪ ಅವರನ್ನು ಭೇಟಿಯಾಗಲೆಂದೇ ಸಿದ್ದರಾಮಯ್ಯ ಆಸ್ಪತ್ರೆಗೆ ತೆರಳಿದ್ದಾರೆ ಎಂದು ಸುದ್ದಿಯಾಗಿತ್ತು. ಆದರೆ ಅಲ್ಲವೆಂದು ನಂತರ ದೃಢಪಟ್ಟಿತು.